9

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಎಸ್. ವೀಣಾ ಅಚ್ಚಯ್ಯ ರವರು ನಿಯಮ-72ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ:09 ಕ್ಕೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಹೇಳಿಕೆ:**

ವಿಷಯ: ಕೊಡಗು ಜಿಲ್ಲೆಯಲ್ಲಿ, ಕಳೆದ ಹಲವಾರು ವರ್ಷಗಳಲ್ಲಿ ಸತತವಾಗಿ ಸಂಭವಿಸಿದ ಪ್ರಾಕೃತಿಕ ವಿಕೋಪದಿಂದ, ಕಾಫಿ ಬೆಳೆ ಹಾಳಾಗಿರುವುದರ ಜೊತೆಗೆ ಸತತ ಬೆಲೆ ಕುಸಿತದಿಂದಾಗಿ ಕೊಡಗಿನ ಕಾಫಿ ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸದರಿ ಸಂಕಷ್ಟದ ಪರಿಸ್ಥಿತಿಯ ಹಿನ್ನೆಲೆಯಲ್ಲಿ, ಕೊಡಗು ಜಿಲ್ಲೆಯಲ್ಲಿನ ಕಾಫಿ ಬೆಳೆಗಾರರು ಬಳಸುವ 10 ಅಶ್ವಶಕ್ತಿವರೆಗಿನ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡಲು ಸರ್ಕಾರ ಇದುವರೆಗೂ ಕ್ರಮವಹಿಸದೇ ಇರುವುದರಿಂದ ಕಾಫಿ ಬೆಳೆಗಾರರು ತೊಂದರೆಗೊಳಗಾಗಿರುವ ಗಂಭೀರ ಸಮಸ್ಯೆ ಬಗ್ಗೆ.

****

ಮಾನ್ಯ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ಕಾಫಿ ಬೆಳೆಗಾರರ ಹಿತ ದೃಷ್ಟಿಯಿಂದ ಆರ್ಥಿಕ ಹೊರೆಯಾಗದಂತೆ ಕಡಿಮೆ ದರದಲ್ಲಿ ಅಂದರೆ, 10 ಹೆಚ್.ಪಿ ಮತ್ತು ಅದಕ್ಕಿಂತ ಕಡಿಮೆ ಸಾಮರ್ಥ್ಯದ ಹೊರೆಯನ್ನು ಹೊಂದಿರುವ ಕಾಫಿ ಬೆಳೆಗಾರರ ಪ್ರತಿ ಹೆಚ್.ಪಿ ಗೆ ಮಾಸಿಕ ನಿಗದಿತ ಶುಲ್ಕ ರೂ. 80/- ಹಾಗೂ ಪ್ರತಿ ಯೂನಿಟ್ ಬಳಕೆಗೆ ರೂ.3.85 ಶುಲ್ಕವನ್ನು ವಿಧಿಸಲಾಗುತ್ತಿದೆ.

ಆದಾಗ್ಯೂ, ಕಾಫಿ ಬೆಳೆಗಾರರು ಬಳಸುವ 10 ಅಶ್ವಶಕ್ತಿವರೆಗಿನ ಪಂಪ್‌ಸೆಟ್‌ಗಳ ವಿದ್ಯುತ್ ಗ್ರಾಹಕರುಗಳ ವಿದ್ಯುತ್ ಶುಲ್ಕ ಪಾವತಿಗೆ ವಿನಾಯಿತಿ ನೀಡುವ ವಿಷಯವು ಸರ್ಕಾರದ ಪರಿಶೀಲನೆ ಹಂತದಲ್ಲಿದ್ದು ಅಂತಿಮ ನಿರ್ಣಯ ಕೈಗೊಳ್ಳಬೇಕಾಗಿರುತ್ತದೆ.

ಸಂಖ್ಯೆ: ಎನರ್ಜಿ 08 ಇಬಿಎಸ್ 2022

(ವಿ ಸುನೀಲ್ ಕುಮಾರ್)
ಇಂಧನ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು